# ಸಂಕಲನಾತ್ಮಕ ಮೌಲ್ಯಮಾಪನ-1, 2023-24

**ತರಗತಿ : 10** **ವಿಷಯ : ವಿಜ್ಞಾನ** **ಅಂಕಗಳು : 80** **ಸಮಯ : 3ಗಂಟೆ**

---

## ಭೌತ ವಿಜ್ಞಾನ

**I.ಕೆಳಗಿನ ಪ್ರತಿಯೊಂದು ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸರಿಯಾದುದನ್ನು ಆರಿಸಿ ಕ್ರಮಾಕ್ಷರಗಳೊಂದಿಗೆ ಬರೆಯಿರಿ.** **2x1 =2**

1. ವಿದ್ಯುತ್ ಮಂಡಲದಲ್ಲಿ ರೋಧವನ್ನು ಬದಲಾಯಿಸಲು ಬಳಸುವ ಸಾಧನ

A. ವೋಲ್ಟ್ ಮೀಟರ್ B. ಆಮ್ಮೀಟರ್ C. ಗ್ಯಾಲ್ವನೋಮೀಟರ್ D. ರಿಯೋಸ್ಟಾಟ್

2. ವಿದ್ಯುತ್ ಕಾಂತೀಯ ಪ್ರೇರಣೆ ತತ್ವದ ಆಧಾರದಲ್ಲಿ ಕಾರ್ಯನಿರ್ವಹಿಸುವ ಸಾಧನ

A. ವಿದ್ಯುತ್‌ಜನಕ B. ವಿದ್ಯು ಹೀಟರ್ C. ವಿದ್ಯುತ್ ಮೋಟಾರ್ D.ವಿದ್ಯುತ್ ಫ್ಯಾನ್

**II.ಕೆಳಗಿನ ಪ್ರಶ್ನೆಗಳಿಗೆ ಒಂದು ಶಬ್ದ ಅಥವಾ ವಾಕ್ಯದಲ್ಲಿ ಉತ್ತರಿಸಿ.** **2x1 =2**

3. ಪರಿವರ್ತಿತ ರೋಧ ಎಂದರೇನು?

4. ಒಂದು ವಿದ್ಯುತ್ ಮಂಡಲದಲ್ಲಿ ಓವರ್ ಲೋಡ್ ಉಂಟಾಗಲು ಕಾರಣವೇನು?

**III.ಕೆಳಗಿನ ಪ್ರಶ್ನೆಗಳಿಗೆ ಎರಡು ವಾಕ್ಯಗಳಲ್ಲಿ ಉತ್ತರಿಸಿ.** **2x2 =4**

5. ವಿದ್ಯುತ್ ಮೋಟಾರಿನಲ್ಲಿ ಒಡಕು ಉಂಗುರಗಳ ಪಾತ್ರವೇನು? ವಾಣಿಜ್ಯ ಮೋಟಾರ್‌ಗಳು ಸರಳ ಮೋಟಾರ್‌ಗಳಿಗಿಂತ ಹೇಗೆ ಭಿನ್ನವಾಗಿವೆ?

6. ಕಾಂತೀಯ ಬಲ ರೇಖೆಗಳ ಲಕ್ಷಣಗಳನ್ನು ಬರೆಯಿರಿ.

**IV.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **2x3 =6**

7. ಅ)ಓಮನ ನಿಯಮವನ್ನು ನಿರೂಪಿಸಿ. ಆ)ವಿದ್ಯುತ್ ಕಾಂತೀಯ ಪ್ರೇರಣೆ ಎಂದರೇನು ? ವಿದ್ಯುತ್ ಚಾಲಕ ಬಲವು ಅವಲಂಬಿಸಿರುವ ಅಂಶಗಳು ಯಾವವು?

**ಅಥವಾ**

ವಿದ್ಯುತ್ ಮಂಡಲದಲ್ಲಿ 50Ω ರೋಧವಿರುವ ಒಂದು ವಿದ್ಯುತ್ ಬಲ್ಬ್‌ಅನ್ನು 10 V ಬ್ಯಾಟರಿಗೆ ಸಂಪರ್ಕಿಸಲಾಗಿದೆ. ವಿದ್ಯುತ್ ಬಲ್ಬ್ ನ ಮೂಲಕ ಹರಿಯುವ ವಿದ್ಯುತ್ ಪ್ರವಾಹ ಮತ್ತು ಬಲ್ಬ್ ನ ಸಾಮರ್ಥ್ಯವನ್ನು ಕಂಡುಹಿಡಿಯಿರಿ.

8. ಸರಳ ವಿದ್ಯುತ್ ಜನಕದ ಚಿತ್ರ ಬರೆಯಿರಿ. ಈ ಕೆಳಗಿನ ಭಾಗಗಳನ್ನು ಗುರುತಿಸಿ.

1)ಕುಂಚಗಳು 2)ಉಂಗುರಗಳು

**V.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **2x4 = 8**

9. ಅ) ವಿದ್ಯುತ್ ಮಂಡಲದಲ್ಲಿ ವಿದ್ಯುತ್ ಉಪಕರಣಗಳನ್ನು ಸರಣಿಕ್ರಮದಲ್ಲಿ ಜೋಡಿಸುವ ಬದಲು ಸಮಾಂತರವಾಗಿ ಜೋಡಿಸುವುದರಿಂದ ಆಗುವ ಪ್ರಯೋಜನಗಳೇನು ?

ಆ) ಆಮ್ಮೀಟರ್ ಮತ್ತು ವೋಲ್ಟಾಮೀಟರ್ ಗಳನ್ನು ವಿದ್ಯುತ್ ಮಂಡಲದಲ್ಲಿ ಹೇಗೆ ಜೋಡಿಸುತ್ತಾರೆ?ಅವುಗಳ ಕಾರ್ಯವೇನು?

10. ಅ)ಕಾಂತೀಯ ಬಲರೇಖೆಗಳು ಒಂದನ್ನೊಂದು ಛೇದಿಸುವುದಿಲ್ಲ. ಏಕೆ ?

ಆ)ಕೊಟ್ಟಿರುವ ಚಿತ್ರವನ್ನು ವೀಕ್ಷಿಸಿ. ಚಿತ್ರಕ್ಕೆ ಸಂಬಂಧಿಸಿದಂತೆ ಪ್ರಯೋಗವನ್ನು ಕೈಗೊಂಡಾಗ, ಸುರುಳಿಯಲ್ಲಿ ಯಾವ ವಿಧದ ವಿದ್ಯುತ್ ಪ್ರವಾಹ ಪ್ರೇರಿತವಾಗುತ್ತದೆ ? ನಿಮ್ಮ ಉತ್ತರಕ್ಕೆ ಕಾರಣಕೊಡಿ.



# ರಸಾಯನ ವಿಜ್ಞಾನ

**I.ಕೆಳಗಿನ ಪ್ರತಿಯೊಂದು ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸರಿಯಾದುದನ್ನು ಆರಿಸಿ ಕ್ರಮಾಕ್ಷರಗಳೊಂದಿಗೆ ಬರೆಯಿರಿ. 3x1 =3**

11. ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಸ್ಥಾನಪಲ್ಲಟಗೊಳಿಸುವ ಲೋಹ.

A. ಪಾದರಸ B. ಚಿನ್ನ C. ಕಬ್ಬಿಣ D. ಬೆಳ್ಳಿ

12. ಒಂದು ದ್ರಾವಣ ಕೆಂಪು ಲಿಟ್ಮಸ್‌ಅನ್ನು ನೀಲಿ ಬಣ್ಣಕ್ಕೆ ಬದಲಾಯಿಸಿದರೆ, ಅದರ pH ಮೌಲ್ಯ

(A) 1 (B) 4 (C) 5 (D) 10

13. ಲೋಹದ ಸಲ್ಫೈಡ್ ಅದುರನ್ನು ಆಕ್ಸೈಡ್‌ಗಳನ್ನಾಗಿ ಪರಿವರ್ತಿಸಲು ಉಪಯೋಗಿಸುವ ಪ್ರಕ್ರಿಯೆ.

(A) ಕಾಸುವಿಕೆ (B) ಹುರಿಯುವಿಕೆ (C) ಅಪಕರ್ಷಣೆ (D) ವಿದ್ಯುದ್ವಿಭಜನೆ

**II.ಕೆಳಗಿನ ಪ್ರಶ್ನೆಗಳಿಗೆ ಒಂದು ಶಬ್ದ ಅಥವಾ ವಾಕ್ಯದಲ್ಲಿ ಉತ್ತರಿಸಿ. 3x1 =3**

14. ಚಿಪ್ಸ್ ತಯಾರಕರು ಚಿಪ್ಸ್‌ನ ಪೊಟ್ಟಣದೊಳಗೆ ನೈಟ್ರೋಜನ್ ಅನಿಲವನ್ನು ಹಾಯಿಸುತ್ತಾರೆ ಏಕೆ?

15. ಪ್ಲಾಸ್ಟರ್ ಆಫ್ ಪ್ಯಾರಿಸ್ ಅನ್ನು ತೇವಾಂಶ ನಿರೋಧಕ ಸಂಗ್ರಹಕದಲ್ಲಿ ಸಂಗ್ರಹಿಸಿ ಇಡಬೇಕು ವೈಜ್ಞಾನಿಕ ಕಾರಣ ಕೊಡಿ.

16. ಉಭಯವರ್ತಿ (amphoteric) ಆಕ್ಸೈಡ್‌ಗಳು ಎಂದರೇನು?

**III.ಕೆಳಗಿನ ಪ್ರಶ್ನೆಗಳಿಗೆ ಎರಡು ವಾಕ್ಯಗಳಲ್ಲಿ ಉತ್ತರಿಸಿ. 3x2 = 6**

17. ನೀರಿನ ವಿದ್ಯುತ್ ವಿಭಜನೆಯಲ್ಲಿ ಉಪಯೋಗಿಸುವ ಉಪಕರಣದ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ.1.ಗ್ರಾಫೈಟ್ ದಂಡ 2.ಕ್ಯಾಥೋಡ್

18. ವೈಜ್ಞಾನಿಕ ಕಾರಣ ಕೊಡಿ. – ಆಮ್ಲವನ್ನು ಸಾರರಿಕ್ತಗೊಳಿಸುವ ಆಮ್ಲವನ್ನು ನೀರಿಗೆ ಸೇರಿಸಬೇಕು.

19. ಲೋಹಗಳ ಯಾವುದಾದರೂ ನಾಲ್ಕು ಭೌತಿಕ ಲಕ್ಷಣಗಳನ್ನು ಬರೆಯಿರಿ.

**IV.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ. 3x3 =9**

20. ಈ ಕೆಳಗಿನ ರಾಸಾಯನಿಕ ಕ್ರಿಯೆಗಳು ಸರಿದೂಗಿಸಿದ ರಾಸಾಯನಿಕ ಸಮೀಕರಣಗಳನ್ನು ಬರೆಯಿರಿ.

i) ಕ್ಯಾಲ್ಸಿಯಂ ಕಾರ್ಬೋನೇಟ್ $\rightarrow$ ಕ್ಯಾಲ್ಸಿಯಂ ಆಕ್ಸೈಡ್ + ಕಾರ್ಬನ್ ಡೈ ಆಕ್ಸೈಡ್

ii) ಹೈಡ್ರೋಜನ್ + ಕ್ಲೋರಿನ್ $\rightarrow$ ಹೈಡ್ರೋಜನ್ ಕ್ಲೋರೈಡ್

iii) ಮೆಗ್ನೀಷಿಯಂ + ಹೈಡ್ರೋಕ್ಲೋರಿಕ್ ಆಮ್ಲ $\rightarrow$ ಮೆಗ್ನೀಷಿಯಂ ಕ್ಲೋರೈಡ್ + ಹೈಡ್ರೋಜನ್

21. ಸಾರರಿಕ್ತ ಸಲ್ಫ್ಯೂರಿಕ್ ಆಮ್ಲದೊಂದಿಗೆ ಸತುವಿನ ಚೂರುಗಳ ವರ್ತನೆ ಮತ್ತು ಉರಿಸುವಿಕೆಯ ಮೂಲಕ ಹೈಡ್ರೋಜನ್ ಅನಿಲದ ಪರೀಕ್ಷೆ ತೋರಿಸುವ ಉಪಕರಣದ ಜೋಡಣೆಯ ಅಂದವಾದ ಚಿತ್ರವನ್ನು ಬರೆದು ಎಲ್ಲ ಭಾಗಗಳನ್ನು ಗುರುತಿಸಿ?

22. ಅಯಾನಿಕ್ ಸಂಯುಕ್ತಗಳು ಎಂದರೇನು? ಎರಡು ಲಕ್ಷಣಗಳನ್ನು ಬರೆಯಿರಿ.

**V.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ. 1x4 = 4**

23. ಕಾರಣಕೊಡಿ.

(i) ಅಯಾನಿಕ್ ಸಂಯುಕ್ತಗಳು ಘನಸ್ಥಿತಿಯಲ್ಲಿದ್ದಾಗ ವಿದ್ಯುತ್ ಅವಾಹಕಗಳು,ದ್ರವಿಸಿದ ಸ್ಥಿತಿಯಲ್ಲಿದ್ದಾಗ ಒಳ್ಳೆಯ ವಿದ್ಯುತ್ ವಾಹಕಗಳು.

(ii) ಬೆಳ್ಳಿಯ ಪಾತ್ರೆಗಳನ್ನು ಗಾಳಿಗೆ ತೆರೆದಿಟ್ಟಾಗ ಕ್ರಮೇಣ ಕಪ್ಪಾಗುತ್ತವೆ.

(iii) ಕಬ್ಬಿಣದ ಸಲ್ಫೇಟ್ ದ್ರಾವಣಕ್ಕೆ ತಾಮ್ರವನ್ನು ಸೇರಿಸಿದಾಗ ರಾಸಾಯನಿಕ ಕ್ರಿಯೆ ನಡೆಯುವುದಿಲ್ಲ.

**VI.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ. 1x5 = 5**

**24.** ಅ)ಒಂದು ಜಮೀನಿಗೆ ಕೃಷಿ ತಜ್ಞರು ನಿರ್ದಿಷ್ಟ ಪ್ರಮಾಣದ ಸುಣ್ಣವನ್ನು ಸೇರಿಸಲು ಸಲಹೆ ನೀಡಿದ್ದಾರೆ. ಇದಕ್ಕೆ ಕಾರಣವೇನು ಇರಬಹುದು ವಿವರಿಸಿ? ಆ)ಪ್ರಬಲ ಆಮ್ಲ ಎಂದರೇನು? ಎ, ಬಿ ಮತ್ತು ಸಿ ದ್ರಾವಣಗಳ ಪಿ.ಎಚ್ ಮೌಲ್ಯಗಳು ಕ್ರಮವಾಗಿ 5, 6 ಮತ್ತು 7 ಆಗಿವೆ ಇವುಗಳಲ್ಲಿ ಅತ್ಯಂತ ಹೆಚ್ಚು ಆಮ್ಲಿಯ ಸ್ವಭಾವವನ್ನು ಹೊಂದಿರುವ ದ್ರಾವಣ ಯಾವುದು ಏಕೆ?

# ಜೀವ ವಿಜ್ಞಾನ

**I.ಕೆಳಗಿನ ಪ್ರತಿಯೊಂದು ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸರಿಯಾದುದನ್ನು ಆರಿಸಿ ಕ್ರಮಾಕ್ಷರಗಳೊಂದಿಗೆ ಬರೆಯಿರಿ.** **3x1 =3**

25. ಮಾನವನ ದೇಹದ ಎಲ್ಲಾ ಭಾಗಗಳಿಂದ ರಕ್ತವನ್ನು ಹೃದಯಕ್ಕೆ ಸಾಗಿಸುವ ರಕ್ತನಾಳಗಳು

A. ಅಪಧಮನಿಗಳು B. ಲೋಮನಾಳಗಳು C. ಪುಪ್ಪಸಕ ಅಪಧಮನಿಗಳು D.ಅಭಿಧಮನಿಗಳು

26. ನರಕೋಶದಲ್ಲಿ ವಿದ್ಯುತ್ ಆವೇಗವು ಚಲಿಸುವ ಸರಿಯಾದ ಮಾರ್ಗ

A. ಡೆಂಡ್ರೈಟ್ → ಕೋಶಕಾಯ → ಅಕ್ಸಾನ್ → ನರತುದಿ B. ಡೆಂಡ್ರೈಟ್→ ಅಕ್ಸಾನ್→ ಕೋಶಕಾಯ→ ನರತುದಿ

C. ನರತುದಿ→ ಡೆಂಡ್ರೈಟ್→ ಕೋಶಕಾಯ→ ಅಕ್ಸಾನ್ D. ಅಕ್ಸಾನ್→ ನರತುದಿ→ ಕೋಶಕಾಯ → ಡೆಂಡ್ರೈಟ್

27. ಮೊದಲನೇ ಪೋಷಣಾಸ್ತರಕ್ಕೆ ಲಭ್ಯವಿರುವ ಶಕ್ತಿ 5000 J ಗಳಾದರೆ , ಹಾವಿಗೆ ದೊರಕುವ ಶಕ್ತಿಯ ಪ್ರಮಾಣ

A. 500 J B. 5 J C. 0.5 J D. 50 J

**II.ಕೆಳಗಿನ ಪ್ರಶ್ನೆಗಳಿಗೆ ಒಂದು ಶಬ್ದ ಅಥವಾ ವಾಕ್ಯದಲ್ಲಿ ಉತ್ತರಿಸಿ.** **3x1 =3**

28. ಸ್ನಾಯುಕೋಶಗಳಲ್ಲಿ ಲ್ಯಾಕ್ಟಿಕ್ ಆಮ್ಲವು ಯಾವ ಸಂದರ್ಭದಲ್ಲಿ ಉತ್ಪತ್ತಿಯಾಗುತ್ತದೆ?
29. ಸಸ್ಯಗಳಲ್ಲಿ ಧನಗುರುತ್ವಾನುವರ್ತನೆಗೆ ಒಂದು ಉದಾಹರಣೆ ಕೊಡಿ.
30. ಜೈವಿಕ ಸಂವರ್ಧನೆ ಎಂದರೇನು

**III.ಕೆಳಗಿನ ಪ್ರಶ್ನೆಗಳಿಗೆ ಎರಡು ವಾಕ್ಯಗಳಲ್ಲಿ ಉತ್ತರಿಸಿ.** **3x2 = 6**

31. ಚಪಾತಿಯನ್ನು ನಿಧಾನವಾಗಿ ಜಗಿದು ತಿಂದಾಗ ಸಿಹಿಯಾಗಿ ರುಚಿಸುತ್ತದೆ. ಏಕೆ?
32. ನ್ಯೂರಾನ್ ರಚನೆಯನ್ನು ತೋರಿಸುವ ಚಿತ್ರ ಬರೆದು, ಭಾಗಗಳನ್ನು ಗುರುತಿಸಿ
33. ಒಬ್ಬ ವಿದ್ಯಾರ್ಥಿಯು ಸೌತೆಕಾಯಿ ಚೂರುಗಳು, ಗಾಜಿನ ಚೂರು, ಬಾಳೆಹಣ್ಣಿನ ಸಿಪ್ಪೆ ಮತ್ತು ಪ್ಲಾಸ್ಟಿಕ್ ಪೆನ್ ಇವುಗಳನ್ನು ಒಂದು ಗುಂಡಿಯಲ್ಲಿ ಹಾಕಿ ಮುಚ್ಚುತ್ತಾನೆ. ಒಂದು ತಿಂಗಳಿನ ನಂತರ ಆ ವಸ್ತುಗಳಲ್ಲಿ ಯಾವ ಬದಲಾವಣೆಗಳನ್ನು ಗಮನಿಸಬಹುದು ? ಈ ಬದಲಾವಣೆಗಳಿಗೆ ವೈಜ್ಞಾನಿಕ ಕಾರಣ ಕೊಡಿ

**IV.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **3x3 =9**

34. ಸಸ್ಯವೊಂದರ ಎತ್ತರದ ಭಾಗಗಳಿಗೆ ನೀರಿನ ಸಾಗಾಣಿಕೆ ಹೇಗೆ ಆಗುತ್ತದೆ?
35. ಈ ಕೆಳಗಿನ ಸಸ್ಯ ಹಾರ್ಮೋನ್‌ಗಳ ಕಾರ್ಯ ತಿಳಿಸಿ

i) ಆಕ್ಸಿನ್ ii) ಸೈಟೋಕೈನಿನ್ iii) ಅಬ್ಸಿಸಿಕ್ ಆಮ್ಲ

36. ಓಝೋನ್ ಪದರವನ್ನು ರಕ್ಷಿಸುವುದು ಅಗತ್ಯವಾಗಿದೆ. ಏಕೆ?ಇತ್ತೀಚಿನ ದಿನಗಳಲ್ಲಿ ಕ್ಲೋರೋಫ್ಲೋರೋ ಕಾರ್ಬನ್ (CFC) ಮುಕ್ತ ರೆಫ್ರಿಜರೇಟರ್ ಗಳನ್ನು ತಯಾರಿಸುತ್ತಾರೆ ಏಕೆ?
37. ಮಾಲಿನ್ಯಕ್ಕೆ ಒಳಪಟ್ಟ ಜಲಪರಿಸರ ವ್ಯವಸ್ಥೆಯಲ್ಲಿ ಕಂಡುಬರುವ ಆಹಾರ ಸರಪಳಿಯೊಂದನ್ನು ನೀಡಿದೆ. ಇದನ್ನು ವೀಕ್ಷಿಸಿ ಮತ್ತು ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :

ಸಿಹಿನೀರು → ಶೈವಲಗಳು → ಮೀನುಗಳು → ಪಕ್ಷಿಗಳು

**i.** ಜೈವಿಕ ಸಂವರ್ಧನೆಯಿಂದ ಹೆಚ್ಚು ತೊಂದರೆಗೆ ಒಳಗಾಗುವ ಜೀವಿಗಳು ಯಾವುವು?ಏಕೆ?

**ii.** ಜೈವಿಕ ಸಂವರ್ಧನೆಯಿಂದ ಈ ಪರಿಸರ ವ್ಯವಸ್ಥೆಯು ಕ್ರಮೇಣವಾಗಿ ನಶಿಸಿ ಹೋಗುತ್ತದೆ,ಏಕೆ?

**V.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **1x4 = 4**

38. ಮಾನವನ ಹೃದಯದ ನೀಳಛೇದ ನೋಟವನ್ನು ತೋರಿಸುವ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ.

1)ಸೆಪ್ಟಮ್ 2) ಮಹಾ ಅಪಧಮನಿ